ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತರಿಗೆ ನೀಡಿರುವ ಸಲವತ್ತುಗಳ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು):-

122 (1088) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಬಡ ಮುಸ್ಲಿಂ, ಜೈನ ಹಾಗೂ ಅಲ್ಪಸಂಖ್ಯಾತರ ಕುಟುಂಬಗಳಿಗೆ ಗಂಗಾಕಲ್ಯಾಣ ಯೋಜನೆ, ಶ್ರಮಶಕ್ತಿ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗಳಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯವನ್ನು ಒದಗಿಸಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಅಲ್ಪ ಸಂಖ್ಯಾತರ ಕುಟುಂಬಗಳಿಗೆ ಗಂಗಾಕಲ್ಯಾಣ ಯೋಜನೆ, ಶ್ರಮಶಕ್ತಿ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗಳಡಿಯಲ್ಲಿ ಸಾಲ ಸೌಲಭ್ಯಗಳನ್ನು ಒದಗಿಸಲು ಅನುಸರಿಸಲಾಗುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2019-20ನೇ ಆರ್ಥಿಕ ವರ್ಷದಲ್ಲಿ ಬಡ ಮುಸ್ಲಿಂ, ಜೈನ ಹಾಗೂ ಅಲ್ಪಸಂಖ್ಯಾತರ ಕುಟುಂಬಗಳಿಗೆ ಗಂಗಾಕಲ್ಯಾಣ ಯೋಜನೆ, ಶ್ರಮಶಕ್ತಿ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗಳಡಿಯಲ್ಲಿ ಅತ್ಯಲ್ಪ ಗುರಿಯನ್ನು ನಿಗಧಿಪಡಿಸಲು ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)